ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಬೀದರ್ ಜಿಲ್ಲೆಯ ತಾಲ್ಲೂಕು ಆಸ್ಪತ್ರೆಗಳಲ್ಲಿ ಐ.ಸಿ.ಯು ಘಟಕಗಳ ಕುರಿತು

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1018 (1190) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಐ.ಸಿ.ಯು. ಘಟಕಗಳು ಇಲ್ಲದೆ ರೋಗಿಗಳಿಗೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಐ.ಸಿ.ಯು. ಘಟಕಗಳು ಇದ್ದರೂ ಸರಿಯಾಗಿ ಕಾರ್ಯನಿರ್ವಹಿಸದೇ ಇರುವ ಘಟಕಗಳ ಸಂಖ್ಯೆ ಎಷ್ಟು ; ಇವುಗಳನ್ನು ದುರಸ್ಥಿಗೊಳಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಐ.ಸಿ.ಯು ಘಟಕಗಳ ವ್ಯವಸ್ಥೆ ಇಲ್ಲದಿರುವ ತಾಲ್ಲೂಕು ಆಸ್ಪತ್ರೆಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)